Akashvani: Bangalore
National Bulletin In Kannada
05.11.2026: 13.10hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
05.11.2026: 13.10hrs
****

ಮುಖ್ಯಾಂಶಗಳು :

1. ೨೦೨೬ರ ಏಷ್ಯನ್ ಪ್ಯಾರಾಗೇಮ್ಸ್‌ನ ಕ್ರೀಡಾಪಟುಗಳೊಂದಿಗೆ ನವದೆಹಲಿಯಲ್ಲಿಂದು ಪ್ರಧಾನಿ ನರೇಂದ್ರ ಮೋದಿ ಸಂವಾದ
2. ವಿಕಸಿತ ಭಾರತ ಜಿ ರಾಮ್ ಜಿ ಯೋಜನೆಯಡಿ ಪಶು ಸಂಗೋಪನೆ ಮೂಲಸೌಕರ್ಯ ಬಲಪಡಿಸಲು ರಾಜ್ಯಗಳಿಗೆ ಕೇಂದ್ರ ಸರ್ಕಾರ ನಿರ್ದೇಶನ
3. ಕಾಮನ್‌ವೆಲ್ತ್ ರಾಷ್ಟ್ರಗಳ ನಡುವೆ ಪೂರೈಕೆ ಸರಪಳಿ ವೈವಿಧ್ಯೀಕರಣಕ್ಕೆ ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಕರೆ
4. ಯೂತ್ ಒಲಿಂಪಿಕ್ಸ್ ಬ್ಯಾಡ್ಮಿಂಟನ್ ಸ್ಪರ್ಧೆ ; ಮಹಿಳಾ ಸಿಂಗಲ್ಸ್‌ನಲ್ಲಿ ಫೈನಲ್ ತಲುಪಿದ ತಾನ್ವಿ ಪತ್ರಿ
5. ಏಷ್ಯನ್ ಹಾಕಿ ಚಾಂಪಿಯನ್ಸ್ ಟ್ರೋಫಿ ; ಪ್ರಶಸ್ತಿಗಾಗಿ ಇಂದು ಭಾರತ, ಜಪಾನ್ ಹಣಾಹಣಿ

****

ಜಪಾನ್ ನಲ್ಲಿ ನಡೆದ ಏಷ್ಯನ್ ಪ್ಯಾರಾ ಗೇಮ್ಸ್ ೨೦೨೬ರಲ್ಲಿ ಸಾರ್ವಕಾಲಿಕ ಶ್ರೇಷ್ಠ ಸಾಧನೆ ತೋರಿದ ಭಾರತೀಯ ಕ್ರೀಡಾಪಟುಗಳೊಂದಿಗೆ ಪ್ರಧಾನಿ ನರೇಂದ್ರ ಮೋದಿ ಇಂದು ನವದೆಹಲಿಯ ಇಂದಿರಾಗಾಂಧಿ ಕ್ರೀಡಾ ಸಂಕೀರ್ಣದಲ್ಲಿ ಸಂವಾದ ನಡೆಸಲಿದ್ದಾರೆ. ಈ ವಿಶೇಷ ಸಮಾರಂಭದಲ್ಲಿ ಪ್ರಧಾನಿಯವರು ಕ್ರೀಡಾಪಟುಗಳನ್ನು ಅಭಿನಂದಿಸಿ, ಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಜಪಾನ್‌ನ ಐಚಿ-ನಗೋಯಾದಲ್ಲಿ ನಡೆದ ಏಷ್ಯನ್ ಪ್ಯಾರಾ ಕ್ರೀಡಾಕೂಟದಲ್ಲಿ ಭಾರತವು ತನ್ನ ಇತಿಹಾಸದಲ್ಲೇ ಅತ್ಯುತ್ತಮ ಪ್ರದರ್ಶನ ನೀಡಿದೆ. ಒಟ್ಟು ೯೭ ಪ್ಯಾರಾ ಕ್ರೀಡಾಪಟುಗಳು ಭಾಗವಹಿಸಿ, ೧೧೪ ಪದಕಗಳನ್ನು ಗೆಲ್ಲುವ ಮೂಲಕ ದೇಶದ ಕೀರ್ತಿಯನ್ನು ವಿಶ್ವಮಟ್ಟದಲ್ಲಿ ಹೆಚ್ಚಿಸಿದ್ದಾರೆ. ಈ ಪದಕ ಪಟ್ಟಿಯಲ್ಲಿ ೩೦ ಚಿನ್ನ, ೩೫ ಬೆಳ್ಳಿ ಹಾಗೂ ೪೯ ಕಂಚಿನ ಪದಕಗಳು ಸೇರಿವೆ.

****

ಗ್ರಾಮೀಣ ಭಾಗದಲ್ಲಿ ಮೇವಿನ ಭದ್ರತೆ, ಹುಲ್ಲುಗಾವಲು ಅಭಿವೃದ್ಧಿ ಹಾಗೂ ಪಶುಸಂಗೋಪನೆ ಮೂಲಸೌಕರ್ಯಗಳನ್ನು ಬಲಪಡಿಸಲು ವಿಕಸಿತ ಭಾರತ ಜಿ ರಾಮ್ ಜಿ ಕಾಯ್ದೆ - ೨೦೨೫ರಡಿಯಲ್ಲಿ ವಿವಿಧ ಯೋಜನೆಗಳನ್ನು ಸಂಯೋಜಿಸಿ ಜಾರಿಗೊಳಿಸುವಂತೆ ಕೇಂದ್ರ ಸರ್ಕಾರ ರಾಜ್ಯಗಳಿಗೆ ಸಲಹೆ ನೀಡಿದೆ. ಗ್ರಾಮೀಣಾಭಿವೃದ್ಧಿ ಮತ್ತು ಪಶು ಸಂಗೋಪನೆ ಇಲಾಖೆಗಳು ಜಂಟಿಯಾಗಿ ಈ ಮಾರ್ಗಸೂಚಿ ಹೊರಡಿಸಿದ್ದು, ಪಶುಸಂಗೋಪನೆಯನ್ನೇ ನೆಚ್ಚಿಕೊಂಡಿರುವ ಸಣ್ಣ, ಅತಿ ಸಣ್ಣ ಮತ್ತು ಭೂರಹಿತ ರೈತರ ಜೀವನೋಪಾಯವನ್ನು ಸುಧಾರಿಸುವುದು ಇದರ ಉದ್ದೇಶವಾಗಿದೆ. ಈ ಯೋಜನೆಯಡಿ ಅನುಮತಿಸಲಾದ ೩೭೫ ಕಾಮಗಾರಿಗಳಲ್ಲಿ ಮೇವು ಬೆಳೆ, ಸಂಗ್ರಹಣೆ, ಪಶು ಕೊಟ್ಟಿಗೆ, ಡೈರಿ ಹಾಗೂ ಪಶು ವೈದ್ಯಕೀಯ ಸೌಲಭ್ಯಗಳಿಗೆ ಸಂಬಂಧಿಸಿದ ೨೨ ಪ್ರಮುಖ ಕೆಲಸಗಳನ್ನು ಗುರುತಿಸಲಾಗಿದೆ. ಪಂಚಾಯತ್ ರಾಜ್ ಸಂಸ್ಥೆಗಳು ಹಾಗೂ ಗ್ರಾಮ

ಸಭೆಗಳ ಅನುಮೋದನೆಯೊಂದಿಗೆ ವಿಕಸಿತ ಗ್ರಾಮ್ ಪಂಚಾತ್ ಯೋಜನೆಗಳ ಮೂಲಕ ಈ ಕಾಮಗಾರಿಗಳನ್ನು ಕೈಗೊಳ್ಳಲಾಗುವುದು.ಈ ನಿಟ್ಟಿನಲ್ಲಿ ಗ್ರಾಮೀಣಾಭಿವೃದ್ಧಿ, ಪಶುಸಂಗೋಪನೆ ಹಾಗೂ ಕೃಷಿ ಇಲಾಖೆಗಳು ಜಂಟಿಯಾಗಿ ಸಮಗ್ರ ರಾಜ್ಯ ಕ್ರಿಯಾ ಯೋಜನೆಗಳನ್ನು ರೂಪಿಸುವಂತೆ ಸೂಚಿಸಲಾಗಿದೆ.

****

ಕಾಮನ್‌ವೆಲ್ತ್ ರಾಷ್ಟ್ರಗಳು ಹೆಚ್ಚು ವಿಶ್ವಾಸಾರ್ಹ ಹಾಗೂ ಸಣ್ಣ ಮಾರ್ಗಗಳ ಮೂಲಕ ತಮ್ಮ ಪೂರೈಕೆ ಸರಪಳಿಗಳನ್ನು ವೈವಿಧ್ಯಗೊಳಿಸಬೇಕು ಎಂದು ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಕರೆ ನೀಡಿದ್ದಾರೆ. ಆಂಟಿಗುವಾ ಮತ್ತು ಬಾರ್ಬುಡಾದ ಸೇಂಟ್ ಜಾನ್ಸ್‌ನಲ್ಲಿ ನಡೆಯುತ್ತಿರುವ ಕಾಮನ್‌ವೆಲ್ತ್ ರಾಷ್ಟ್ರಗಳ ಸರ್ಕಾರಿ ಮುಖ್ಯಸ್ಥರ ಸಭೆಯ ಭಾಗವಾಗಿ ಆಯೋಜಿಸಲಾಗಿದ್ದ ಉದ್ಯಮಿಗಳ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಉತ್ತಮ ಸಂಪರ್ಕ ವ್ಯವಸ್ಥೆಯು ದೇಶಗಳ ನಡುವಿನ ವ್ಯಾಪಾರ ಮತ್ತು ವಹಿವಾಟಿಗೆ ಹೆಚ್ಚಿನ ಉತ್ತೇಜನ ನೀಡಲಿದೆ ಎಂದು ಪ್ರತಿಪಾದಿಸಿದರು. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಸಚಿವರು, ಜಾಗತಿಕ ಮಟ್ಟದಲ್ಲಿರುವ ಭಾರತದ ಉದ್ಯಮ ಸಮುದಾಯ ಕಾಮನ್‌ವೆಲ್ತ್‌ಗೆ ದೊಡ್ಡ ಆಸ್ತಿಯಾಗಿದೆ. ಜೊತೆಗೆ, ಡಿಜಿಟಲ್ ತಂತ್ರಜ್ಞಾನವು ಪಾರದರ್ಶಕತೆ, ಉತ್ತಮ ಆಡಳಿತ ಹಾಗೂ ಆರ್ಥಿಕ ಪ್ರಗತಿಯ ಪ್ರಮುಖ ಚಾಲಕ ಶಕ್ತಿಯಾಗಿದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ. ಈ ನಡುವೆ ಕಾಮನ್‌ವೆಲ್ತ್ ಸಭೆಯ ಹಿನ್ನೆಲೆಯಲ್ಲಿ ಸಚಿವ ಡಾ.ಎಸ್.ಜೈಶಂಕರ್, ಆಸ್ಟ್ರೇಲಿಯಾ ಹಾಗೂ ಬ್ರಿಟನ್ ಪ್ರಧಾನಮಂತ್ರಿಗಳೊಂದಿಗೆ ವಿವಿಧ ವಲಯಗಳಲ್ಲಿ ದ್ವಿಪಕ್ಷೀಯ ಸಹಕಾರ ಬಲಪಡಿಸುವ ಕುರಿತು ಮಾತುಕತೆ ನಡೆಸಿದ್ದಾರೆ.

****

೧೮೫೭ರ ಪ್ರಥಮ ಸ್ವಾತಂತ್ರ್ಯ ಸಂಗ್ರಾಮದ ವೀರ ಯೋಧರ ಸ್ಮರಣಾರ್ಥ ಅಂಬಾಲಾ ಕಂಟೋನ್ಮೆಂಟ್‌ನಲ್ಲಿ ನಿರ್ಮಿಸಲಾಗಿರುವ ಹುತಾತ್ಮರ ಸ್ಮಾರಕವನ್ನು ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಲೋಕಾರ್ಪಣೆಗೊಳಿಸಲಿದ್ದಾರೆ. ಸುಮಾರು ೨೨ ಎಕರೆ ವಿಶಾಲ ಪ್ರದೇಶದಲ್ಲಿ ಸುಮಾರು ೮೦೦ ಕೋಟಿ ರೂಪಾಯಿ ವೆಚ್ಚದಲ್ಲಿ ಈ ಸ್ಮಾರಕವನ್ನು ನಿರ್ಮಿಸಲಾಗಿದ್ದು, ಇದು ಹರಿಯಾಣದ ಐತಿಹಾಸಿಕ ಪರಂಪರೆಯ ಪ್ರಮುಖ ಹೆಗ್ಗುರುತಾಗಿ ಹೊರಹೊಮ್ಮಲಿದೆ. ೧೮೫೭ರ ಸ್ವಾತಂತ್ರ್ಯ ಹೋರಾಟಕ್ಕೆ ಸಂಬಂಧಿಸಿದ ೬೦೦ಕ್ಕೂ ಅಧಿಕ ಧೀರ ಹುತಾತ್ಮರ ಹೆಸರುಗಳನ್ನು ಈ ಸ್ಮಾರಕದಲ್ಲಿ ಸುವರ್ಣಾಕ್ಷರಗಳಲ್ಲಿ ಕೆತ್ತಲಾಗಿದೆ. ಹುತಾತ್ಮರ ಸ್ಮಾರಕದ ಉದ್ಘಾಟನೆಯ ನಂತರ, ಕೇಂದ್ರ ಗೃಹ ಸಚಿವ ಅಮಿತ್ ಶಾ ಅಂಬಾಲಾದ ಗಾಂಧಿ ಮೈದಾನದಲ್ಲಿ ನಡೆಯಲಿರುವ ಬೃಹತ್ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ.

****

ಆರೋಪಿಯನ್ನು ನ್ಯಾಯಾಲಯದ ಎದುರು ಹಾಜರುಪಡಿಸಲು ಇರುವ ೨೪ ಗಂಟೆಗಳ ಗಡುವು, ಪೊಲೀಸರು ದಾಖಲಿಸುವ ಬಂಧನದ ಸಮಯದಿಂದಲ್ಲ ಬದಲಿಗೆ ವ್ಯಕ್ತಿಯನ್ನು ವಶಕ್ಕೆ ಪಡೆದ ಕ್ಷಣದಿಂದಲೇ ಆರಂಭವಾಗುತ್ತದೆ ಎಂದು ಸುಪ್ರೀಂಕೋರ್ಟ್ ತೀರ್ಪು ನೀಡಿದೆ. ತ್ರಿಪುರ ಹೈಕೋರ್ಟ್ ಜಾಮೀನು ನಿರಾಕರಿಸಿದ್ದ ಆದೇಶವನ್ನು ರದ್ದುಗೊಳಿಸಿದ ನ್ಯಾಯಮೂರ್ತಿ ಉಜ್ಜಲ್ ಭುಯಾನ್ ಮತ್ತು ನ್ಯಾಯಮೂರ್ತಿ ಅತುಲ್ ಎಸ್ ಚಂದೂರ್‌ಕರ್ ಅವರ ಪೀಠ, ಸಂವಿಧಾನದಡಿ ಬಂಧಿತ ವ್ಯಕ್ತಿಯನ್ನು ೨೪ ಗಂಟೆಯೊಳಗೆ ನ್ಯಾಯಾಲಯದ ಎದುರು ಹಾಜರುಪಡಿಸುವ ನಿಯಮ ವ್ಯಕ್ತಿಯ ಸ್ವಾತಂತ್ರ್ಯವನ್ನು ತಡೆಹಿಡಿದ ಕ್ಷಣದಿಂದಲೇ ಅನ್ವಯಿಸುತ್ತದೆ ಎಂದು ಸ್ಪಷ್ಟಪಡಿಸಿದೆ. ಶೋಧ ಮತ್ತು ಜಪ್ತಿ ಪ್ರಕ್ರಿಯೆ ಮುಗಿದ ಬಳಿಕ ಅಥವಾ ಅಧಿಕೃತ ದಾಖಲಾತಿಯ

ನಂತರವಷ್ಟೇ ೨೪ ಗಂಟೆಗಳ ಗಡುವನ್ನು ಲೆಕ್ಕ ಹಾಕುವುದು ಸಂಪೂರ್ಣ ಅಸಂವಿಧಾನಿಕ ಎಂದು ಸುಪ್ರೀಂಕೋರ್ಟ್ ಅಭಿಪ್ರಾಯಪಟ್ಟಿದೆ. ಪ್ರಯಾಣದ ಸಮಯವನ್ನು ಹೊರತುಪಡಿಸಿ ಮ್ಯಾಜಿಸ್ಟ್ರೇಟ್ ಅವರ ಅನುಮತಿಯಿಲ್ಲದೇ ೨೪ ಗಂಟೆಗಳಿಗಿಂತ ಹೆಚ್ಚು ಕಾಲ ವಶದಲ್ಲಿಟ್ಟುಕೊಂಡರೆ ಆರೋಪಿಯನ್ನು ತಕ್ಷಣವೇ ಬಿಡುಗಡೆ ಮಾಡಬೇಕೆಂದು ಪೀಠ ನಿರ್ದೇಶಿಸಿದೆ. ಭಾರತೀಯ ನಾಗರಿಕ ಸುರಕ್ಷಾ ಸಂಹಿತೆಯ ಅಡಿ ವಶಕ್ಕೆ ಪಡೆದ ಅವಧಿ ಸಮಂಜಸವಾಗಿದೆ ಎಂಬುದನ್ನು ಮ್ಯಾಜಿಸ್ಟ್ರೇಟ್‌ಗಳು ಸ್ವತಂತ್ರವಾಗಿ ಪರಿಶೀಲಿಸುವುದು ಕಡ್ಡಾಯ ಎಂದು ತಿಳಿಸಿರುವ ಪೀಠ ಅರ್ಜಿದಾರರಿಗೆ ಜಾಮೀನು ಮಂಜೂರು ಮಾಡಿದೆ.

****

ಕೃತಕ ಬುದ್ಧಿಮತ್ತೆ ಏಜೆಂಟ್‌ಗಳನ್ನು ಬಳಸಿಕೊಂಡು ಆರ್ಥಿಕ ಲಾಭದ ಉದ್ದೇಶದಿಂದ ನಡೆಸಲಾಗುವ ಸೈಬರ್ ದಾಳಿಗಳು ಹೆಚ್ಚುತ್ತಿರುವ ಕುರಿತು ಭಾರತೀಯ ಸೈಬರ್ ಅಪರಾಧ ಸಮನ್ವಯ ಕೇಂದ್ರವು, ದೇಶದ ಬ್ಯಾಂಕ್‌ಗಳು, ಬ್ಯಾಂಕೇತರ ಹಣಕಾಸು ಸಂಸ್ಥೆಗಳು ಹಾಗೂ ಫಿನ್‌ಟೆಕ್ ಕಂಪನಿಗಳಿಗೆ ಕಟ್ಟುನಿಟ್ಟಿನ ಎಚ್ಚರಿಕೆ ನೀಡಿದೆ. ಕೇಂದ್ರ ಗೃಹ ಸಚಿವಾಲಯದ ಅಡಿಯಲ್ಲಿ ಕಾರ್ಯನಿರ್ವಹಿಸುವ ಈ ಕೇಂದ್ರ ಸೈಬರ್ ಭದ್ರತೆ ಕುರಿತು ಹಣಕಾಸು ಸಂಸ್ಥೆಗಳಿಗೆ ಸಲಹಾಪತ್ರವನ್ನು ಹೊರಡಿಸಿದ್ದು, ಭಾರತೀಯ ಕಂಪ್ಯೂಟರ್ ತುರ್ತು ಪ್ರತಿಕ್ರಿಯೆ ತಂಡ ಸೂಚಿಸಿರುವ ಭದ್ರತಾ ಮಾರ್ಗಸೂಚಿಗಳು ಹಾಗೂ ಸುರಕ್ಷತಾ ಕ್ರಮಗಳನ್ನು ತುರ್ತಾಗಿ ಜಾರಿಗೆ ತರಬೇಕೆಂದು ನಿರ್ದೇಶಿಸಿದೆ.

****

ರಾಜಕೀಯ ರ‍್ಯಾಲಿ ಹಾಗೂ ಧರಣಿ-ಪ್ರತಿಭಟನೆಗಳಿಂದ ದೆಹಲಿಯಲ್ಲಿ ನಿರಂತರವಾಗಿ ವ್ಯಾಪಾರ ವಹಿವಾಟಿಗೆ ಅಡಚಣೆಯಾಗುತ್ತಿರುವುದನ್ನು ಖಂಡಿಸಿ ಅಖಿಲ ಭಾರತ ಭಾರತೀಯ ವ್ಯಾಪಾರಿಗಳ ಒಕ್ಕೂಟ-ಸಿಎಐಟಿ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿಗೆ ಪತ್ರ ಬರೆದು ಅಸಮಾಧಾನ ವ್ಯಕ್ತಪಡಿಸಿದೆ. ಪತ್ರದಲ್ಲಿ ಈ ತಿಂಗಳ ೧ ರಂದು ಕಾಂಗ್ರೆಸ್ ಆಯೋಜಿಸಿದ್ದ ರ‍್ಯಾಲಿ ಹಾಗೂ ಕಳೆದ ಒಂದು ತಿಂಗಳಿಂದ ವಿವಿಧ ಸಂಘಟನೆಗಳು ನಡೆಸಿದ್ದ ಪ್ರತಿಭಟನೆಗಳಿಗೆ ಕಾಂಗ್ರೆಸ್ ಸೇರಿದಂತೆ ಇತರೆ ರಾಜಕೀಯ ಪಕ್ಷಗಳು ನೀಡಿದ ಬೆಂಬಲವನ್ನು ವ್ಯಾಪಾರಿ ಒಕ್ಕೂಟ ಪ್ರಶ್ನಿಸಿದೆ. ಪತ್ರಕ್ಕೆ ರಾಹುಲ್ ಗಾಂಧಿ ಅವರಿಂದ ಉತ್ತರ ನಿರೀಕ್ಷಿಸುತ್ತಿರುವುದಾಗಿ ತಿಳಿಸಿದ ಒಕ್ಕೂಟ, ದೀಪಾವಳಿ ಹಬ್ಬ ಮುಗಿದ ತಕ್ಷಣವೇ ಮುಂದಿನ ಹೋರಾಟದ ರೂಪುರೇಷೆಗಳನ್ನು ಸಿದ್ಧಪಡಿಸಲು ದೆಹಲಿಯ ಮತ್ತು ದೇಶದ ಪ್ರಮುಖ ವ್ಯಾಪಾರಿ ನಾಯಕರ ರಾಷ್ಟ್ರೀಯ ಮಟ್ಟದ ಸಭೆಯನ್ನು ನವದೆಹಲಿಯಲ್ಲಿ ಕರೆಯಲಾಗುವುದು ಎಂದು ಘೋಷಿಸಿದೆ.ಜೊತೆಗೆ ಈ ವಿಚಾರವಾಗಿ ದೇಶಾದ್ಯಂತ ಧಿಕ್ಕಾರ ದಿನ ಆಚರಿಸಲಾಗುವುದು ಎಂದು ಪ್ರಕಟಿಸಲಾಗಿದೆ.

****

ಸೆನಗಲ್‌ನ ಡಾಕರ್‌ನಲ್ಲಿ ನಡಯುತ್ತಿರುವ ಯೂತ್ ಒಲಿಂಪಿಕ್ಸ್ ಕ್ರೀಡಾಕೂಟದ ಬ್ಯಾಡ್ಮಿಂಟನ್ ಸ್ಪರ್ಧೆಯ ಮಹಿಳಾ ಸಿಂಗಲ್ಸ್ ವಿಭಾಗದಲ್ಲಿ ಭಾರತದ ಉದಯೋನ್ಮುಖ ಆಟಗಾರ್ತಿ ತಾನ್ವಿ ಪತ್ರಿ, ಫೈನಲ್ ತಲುಪುವ ಮೂಲಕ ಇತಿಹಾಸ ನಿರ್ಮಿಸಿದ್ದಾರೆ. ೫೪ ನಿಮಿಷಗಳ ಕಾಲ ನಡೆದ ಸೆಮಿಫೈನಲ್‌ನಲ್ಲಿ ತಾನ್ವಿ ಜಪಾನ್‌ನ ಯುಜುನೊ ವಾತನಬೆ ಅವರನ್ನು ೨೧-೧೪, ೧೧-೨೧, ೨೧-೧೯ ಅಂತರದಲ್ಲಿ ಮಣಿಸಿ ಫೈನಲ್‌ಗೆ ಲಗ್ಗೆ ಇಟ್ಟಿದ್ದಾರೆ. ಈ ಸಾಧನೆ ಮಾಡಿದ ಭಾರತದ ಮೊದಲ ಮಹಿಳಾ ಶಟ್ಲರ್ ಎಂಬ

ಹೆಗ್ಗಳಿಕೆಗೆ ತಾನ್ವಿ ಪಾತ್ರರಾಗಿದ್ದಾರೆ. ಇಂದು ನಡೆಯಲಿರುವ ಫೈನಲ್ ಪಂದ್ಯದಲ್ಲಿ ತಾನ್ವಿ ಚೀನಾದ ಯಿ ಕ್ಸಿನ್ ಜಾಂಗ್ ಅವರನ್ನು ಎದುರಿಸಲಿದ್ದಾರೆ.

****

ಮೊಹಾಲಿಯಲ್ಲಿ ನಡೆಯುತ್ತಿರುವ ಏಷ್ಯನ್ ಚಾಂಪಿಯನ್ಸ್ ಟ್ರೋಫಿ ಹಾಕಿ ಟೂರ್ನಿಯ ಫೈನಲ್ ಪಂದ್ಯದಲ್ಲಿಂದು ಹಾಲಿ ಚಾಂಪಿಯನ್ ಭಾರತ, ಜಪಾನ್ ತಂಡವನ್ನು ಎದುರಿಸಲಿದೆ. ಪಂದ್ಯ ಸಂಜೆ ೭ ಗಂಟೆಗೆ ಆರಂಭವಾಗಲಿದೆ. ನಿನ್ನೆ ನಡೆದ ಸೆಮಿಫೈನಲ್ ಪಂದ್ಯದಲ್ಲಿ ಭಾರತ, ದಕ್ಷಿಣ ಕೊರಿಯಾ ವಿರುದ್ಧ ೮-೧ ಅಂತರದ ಜಯ ಸಾಧಿಸಿ, ಫೈನಲ್‌ಗೆ ಲಗ್ಗೆ ಇಟ್ಟಿದೆ. ಮತ್ತೊಂದು ಸೆಮಿಫೈನಲ್ ಪಂದ್ಯದಲ್ಲಿ ಜಪಾನ್ ತಂಡ ಮಲೇಷಿಯಾ ವಿರುದ್ಧ ೦-೦ ಗೋಲುಗಳ ಸಮಬಲದ ನಂತರ ಪೆನಾಲ್ಟಿ ಶೂಟ್‌ಔಟ್‌ನಲ್ಲಿ ೫-೩ ಅಂತರದಿಂದ ಜಯಗಳಿಸಿತು. ೩ನೇ ಸ್ಥಾನಕ್ಕಾಗಿ ನಡೆಯುವ ಪಂದ್ಯದಲ್ಲಿ ಮಲೇಷಿಯಾ ಮತ್ತು ದಕ್ಷಿಣ ಕೊರಿಯಾ ತಂಡಗಳು ಸೆಣಸಲಿವೆ.

****

೨೦೨೬ರ ಅಂತ್ಯದ ನಂತರ ಇಸ್ರೇಲ್‌ಗೆ ಅಮೆರಿಕ ನೀಡುತ್ತಿರುವ ವಾರ್ಷಿಕ ೪ ಶತಕೋಟಿ ಡಾಲರ್ ಆರ್ಥಿಕ ನೆರವನ್ನು ಸ್ಥಗಿತಗೊಳಿಸಲಾವುದು ಎಂದು ಅಮೆರಿಕ ಅಧ್ಯಕ್ಷ ಡೋನಾಲ್ಡ್ ಟ್ರಂಪ್ ತಿಳಿಸಿದ್ದಾರೆ. ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರೊಂದಿಗಿನ ಒಪ್ಪಂದದ ಬೆನ್ನಲ್ಲೆ ಈ ನಿರ್ಧಾರ ಕೈಗೊಳ್ಳಲಾಗಿದೆ. ಆದರೆ ಅಗತ್ಯ ಬಿದ್ದಲ್ಲಿ ಅಮೆರಿಕ ಇಸ್ರೇಲ್‌ಗೆ ಸಹಾಯ ಮುಂದುರಿಸಲಿದೆ ಎಂದು ಅಧ್ಯಕ್ಷ ಟ್ರಂಪ್ ಸಂದರ್ಶನವೊಂದರಲ್ಲಿ ತಿಳಿಸಿದ್ದಾರೆ. ಆದರೆ ಇಸ್ರೇಲ್ ನಿಂದ ಈ ಕುರಿತು ಯಾವುದೇ ಅಧಿಕೃತ ಪ್ರಕಟಣೆ ಹೊರ ಬಂದಿಲ್ಲ.

******END*****